# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 01.04.2011**

ರಾಷ್ಟ್ರೀಯ ತಂಬಾಕು ನಿಷೇಧ ಕಾಯ್ದೆ ಅಡಿಯಲ್ಲಿ ಹಾಗೂ ಪಾಲಿಕೆ ಕೌನ್ಸಿಲ್ ಸಭೆಯ ನಿರ್ಣಯದ ಹಿನ್ನೆಲೆಯಲ್ಲಿ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ನಗರದಲ್ಲಿ ಅನಧಿಕೃತವಾಗಿ ನಡೆಯುತ್ತಿರುವ ಹುಕ್ಕಾ ಸೇದುವನ್ನು ನಿಷೇಧಿಸಲು ಪಾಲಿಕೆ ಆರೋಗ್ಯ ಇಲಾಖೆ ದಿನಾಂಕ: 31.03.2011 ರಂದು ನಗರದ ಚರ್ಚ್ ಸ್ಟ್ರೀಟ್ ಪ್ರದೇಶದಲ್ಲಿ ಹೈದಾ ಹೋಟೆಲ್ ಮತ್ತು ಜಾವಾ ಸಿಟಿ ಹೋಟೆಲ್‌ಗಳ ಮೇಲೆ ದಾಳಿ ನಡೆಸಿ 7 ಹುಕ್ಕಾ ಪರಿಕರಣಗಳನ್ನು ವಶಪಡಿಸಿಕೊಳ್ಳಲಾಗಿದೆ. ಮುಂದೆಯೂ ಈ ರೀತಿ ಅನಧಿಕೃತವಾಗಿ ಹುಕ್ಕಾ ಕೇಂದ್ರ ನಡೆಸುತ್ತಿರುವ ಹೋಟೆಲ್ ಉದ್ದಿಮೆಗಳ ಮೇಲೆ ದಾಳಿ ನಡೆಸಿ, ಅಂತಹ ಹೋಟೆಲ್‌ಗಳ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದೆಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**